ಯೋಜನೆಗೆ ಸಂಬಂಧಪಟ್ಟಂತೆ ಯಾವುದೇ ಕೆಲಸವನ್ನು ತೆಗೆದುಕೊಳ್ಳಬಾರದೆಂದು ಸೂಚಿಸಿದೆ.

ವಿಷಯ:– ಚನ್ನಪಟ್ಟಣ ತಾಲ್ಲೂಕಿನಲ್ಲಿ ಕೈಗಾರಿಕಾ ಮಳಿಗೆಗಳ ನಿರ್ಮಾಣ

128 (763) ಶ್ರೀ ಸಾದತ್ ಆಲಿ ಖಾನ್ (ಚೆನ್ನಪಟ್ಟಣ)

ಮಾನ್ಯ ಮುಖ್ಯಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ ?

ಅ) ಚನ್ನಪಟ್ಟಣ ತಾಲ್ಲೂಕಿನಲ್ಲಿ ಕೈಗಾರಿಕಾ ಮಳಿಗೆಗಳ ನಿರ್ಮಾಣದ ಸಲುವಾಗಿ ಕೈಗಾರಿಕಾ ಮತ್ತು ವಾಣಿಜ್ಯ ಇಲಾಖೆಯು 25 ಎಕರೆ ಜಮೀನನ್ನು ಸ್ವಾಧೀನಕ್ಕೆ ತೆಗೆದುಕೊಂಡಿರುವುದು ನಿಜವೇ;

ಆ) ಹಾಗಿದ್ದ ಪಕ್ಷದಲ್ಲಿ ಸ್ವಾಧೀನಪಡಿಸಿಕೊಳ್ಳಲಾದ ಭೂಮಿಯಲ್ಲಿ ಕಳೆದ ಎರಡು ವರ್ಷಗಳಿಂದಲೂ ಮಳಿಗೆಗಳನ್ನು ನಿರ್ಮಿಸದೆ ಇರುವುದಕ್ಕೆ ಕಾರಣ;

ಇ) ಮಳಿಗೆಗಳನ್ನು ಯಾವಾಗ ನಿರ್ಮಿಸಲಾಗುವುದು ?

ಶ್ರೀ ಎಂ. ವೀರಪ್ಪಮೊಯಿಲಿ (ಮುಖ್ಯಮಂತ್ರಿಗಳು)

ಅ) ಹೌದು

ಆ) ಈ ಸ್ಥಳದಲ್ಲಿ ಮಳಿಗೆಗಳಿಗಿರುವ ವಾಸ್ತವ ಬೇಡಿಕೆಯನ್ನು ಕುರಿತಂತೆ ಮಾಹಿತಿಯನ್ನು ಸಂಗ್ರಹಿಸಲಾಗುತ್ತಿದೆ.

ಇ) ಮಳಿಗೆಗಳಿಗೆ ಬೇಡಿಕೆ ಇದ್ದ ಪಕ್ಷದಲ್ಲಿ 1993–94ರಲ್ಲಿ ನಿರ್ಮಿಸಲಾಗುವುದು.

ಚನ್ನಪಟ್ಟಣಕ್ಕೆ ಪ್ರತ್ಯೇಕ ಟ್ರಾಫಿಕ್ ಪೊಲೀಸ್ ಠಾಣೆ.

129 (764) ಶ್ರೀ ಸಾದತ್ ಆಲಿ ಖಾನ್ (ಚನ್ನಪಟ್ಟಣ)

ಮಾನ್ಯ ಮುಖ್ಯಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ ?

ಅ) ಕಳೆದ ಎರಡು ವರ್ಷಗಳಿಂದ ಚನ್ನಪಟ್ಟಣದಲ್ಲಿ ಪ್ರತ್ಯೇಕ ಟ್ರಾಫಿಕ್ ಪೊಲೀಸ್ ಠಾಣೆಯನ್ನು ತೆರೆಯುವ ಪ್ರಸ್ತಾಪವು ಇರುವುದೇ;

ಆ) ಈ ಬಗ್ಗೆ ಸರ್ಕಾರವು ತೆಗೆದುಕೊಂಡ ಕ್ರಮವೇನು;

ಇ) ಯಾವಾಗ ಇದನ್ನು ಮಂಜೂರು ಮಾಡಲಾಗುವುದು ?

ಶ್ರೀ ಎಂ. ವೀರಪ್ಪಮೊಯಿಲಿ (ಮುಖ್ಯಮಂತ್ರಿಗಳು)

ಅ) ಇಲ್ಲ

ಆ) ಉದ್ಭವಿಸುವುದಿಲ್ಲ

ಇ) ಉದ್ಭವಿಸುವುದಿಲ್ಲ.

ಚನ್ನಪಟ್ಟಣದ ಸಾರ್ವಜನಿಕ ಆಸ್ಪತ್ರೆಯನ್ನು ಮೇಲ್ದರ್ಜೆಗೇರಿಸುವುದು.

130 (765) ಶ್ರೀ ಸಾದತ್ ಆಲಿ ಖಾನ್ (ಚನ್ನಪಟ್ಟಣ)

ಮಾನ್ಯ ಮುಖ್ಯಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ ?